ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/ 91 /2019-20

ಕಾರ್ಯಪಾಲಕ ಅಭಿಯಂತರರವರ ಕಛೇರಿ
ಯಲಹಂಕ ವಿಭಾಗ, ಬೃಬೆಂ.ಮ.ಪಾ.
ಬೆಂಗಳೂರು -64 ದಿನಾಂಕ: 19/10/2019

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:- "Improvements of Roads and drains at Ambedkarnagara Slum and Kanakanagara Slum in ward no:04"

ಉಲ್ಲೇಖ:-1) ಮುಖ್ಯಲೆಕ್ಕಾಧಿಕಾರಿರವರ ಕಛೇರಿ ಕಾಮಗಾರಿ ಸಂಕೇತ:004-20-000016
2) ಮೂಲ ಕಡತದ ಕಂಡಿಕೆ(17)ರಲ್ಲಿ ಮಾನ್ಯ ಆಯುಕ್ತರು, ಆಡಳಿತಾತ್ಮಕ ಅನುಮೋದನೆ ದಿನಾಂಕ:04-10-2019

.....

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ ಉಪ ವಿಭಾಗ) ರವರು 2018-19ನೇ ಸಾಲಿನ ಲೆಕ್ಕಶೀರ್ಷಿಕೆ ಪಿ.1878 (18Per-Works (Bhagyajothi Sooru/Neeru Yojane and General) (54 lakhs/New wards) ರಡಿ ಮಂಜೂರಾಗಿರುವ ಕಾಮಗಾರಿಯನ್ನು 2018-19ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿಯನ್ವಯ ಮೇಲ್ಕಂಡ ಕಾಮಗಾರಿಗೆ ರೂ.99.00 ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಿದ್ದು, ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ:004-20-000016 ದೊರೆತಿರುತ್ತದೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖ(2)ರಲ್ಲಿ ಮಾನ್ಯ ಆಯುಕ್ತರು, ಬಿಬಿಎಂಪಿ, ರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಮೇಲ್ಕಂಡ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆಬಿ12(1)ಪಿ.ಆರ್/394/2018-19 ದಿ:04-10-2018 ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 180 ಕ್ರಸಂ 91 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಧರಪಟ್ಟಿ ಅಧಾರಿತವಲ್ಲದ ಅಂಶಗಳಿಗೆ ಡಿಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಆಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಪರಿಸೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ಪಿಸಾಗಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಡಿ.ಸಿ. ಆಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with CamScanner